## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಪ್ರಕಾಶ್ ಕೆ.ರಾಠೋಡ
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 128
ಉತ್ತರಿಸಬೇಕಾದ ದಿನಾಂಕ : 13-09-2022
ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಯಶಸ್ವಿನಿ ಯೋಜನೆಯು ಜಾರಿಯಾಗಿರುತ್ತದೆಯೇ; ಹಾಗಿದ್ದಲ್ಲಿ, ಈ ಯೋಜನೆಗೆ ಸೇರ್ಪಡುವ ಸದಸ್ಯತ್ವಕ್ಕೆ ಇರುವ ಮಾನದಂಡಗಳೇನು; ಈ ಯೋಜನೆಯಿಂದ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಅಂಕಿ ಅಂಶಗಳೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು) | 2022-23 ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-67 ರಲ್ಲಿ ರೈತ ಬಾಂಧವರ ಬಹುದಿನಗಳ ಬೇಡಿಕೆ ಈಡೇರಿಸಲು ಯಶಸ್ವಿನಿ ಯೋಜನೆಯನ್ನು ಪರಿಷ್ಕರಿಸಿ ಮರು ಜಾರಿಗೊಳಿಸಲು ನಿರ್ಧರಿಸಿ ಈ ಯೋಜನೆಯಿಂದ ಗ್ರಾಮೀಣ ಪ್ರದೇಶದ ರೈತ ಕುಟುಂಬಗಳಿಗೆ ಅತ್ಯುತ್ತಮ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವ ಉದ್ದೇಶಕ್ಕಾಗಿ ರೂ.300 ಕೋಟಿಗಳನ್ನು ಒದಗಿಸಲಾಗುವುದೆಂದು ಘೋಷಿಸಲಾಗಿದೆ.<br><br>ಅದರಂತೆ ಸರ್ಕಾರದ ಆದೇಶ ಸಂಖ್ಯೆ: ಸಿಒ 154 ಸಿಎಲ್ಎಸ್ 2022, ದಿನಾಂಕ:30.03.2022 ರಲ್ಲಿ ಯೋಜನೆ ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ. ರಾಜ್ಯದಲ್ಲಿ ಯಶಸ್ವಿನಿ ಯೋಜನೆಯನ್ನು ಪುನರ್ ಜಾರಿಗೊಳಿಸುವ ಪ್ರಕ್ರಿಯೆ ಪ್ರಗತಿ ಹಂತದಲ್ಲಿರುತ್ತದೆ. ಆದುದರಿಂದ ಈ ಯೋಜನೆಯಡಿ ಸೇರ್ಪಡುವ ಸದಸ್ಯತ್ವಕ್ಕೆ ಮಾನದಂಡಗಳನ್ನು ರೂಪಿಸುವ ಹಂತದಲ್ಲಿದ್ದು, ಯಶಸ್ವಿನಿ ಯೋಜನೆಯಡಿ ಸದಸ್ಯರ ನೋಂದಣಿ ಪ್ರಾರಂಭವಾಗಬೇಕಾಗಿರುತ್ತದೆ. |
| ಆ) | ಯಶಸ್ವಿನಿ ಟ್ರಸ್ಟ್ ರಚಿಸಲಾಗಿದೆಯೇ; ಇದುವರೆಗೆ ಎಷ್ಟು ಸದಸ್ಯತ್ವವನ್ನು ನೋಂದಣಿ ಮಾಡಿಕೊಳ್ಳಲಾಗಿದೆ; | ಹೊಸದಾಗಿ ಯಶಸ್ವಿನಿ ಟ್ರಸ್ಟ್ ರಚಿಸುವ ಕಾರ್ಯ ಪ್ರಗತಿ ಹಂತದಲ್ಲಿರುತ್ತದೆ. |
| ಇ) | ಯಶಸ್ವಿನಿ ಯೋಜನೆಯಿಂದ ಯಾವ ಯಾವ ಕಾಯಿಲೆಗಳಿಗೆ ಚಿಕಿತ್ಸೆ ನೀಡಲಾಗುವುದು ಹಾಗೂ ಇದಕ್ಕೆ ಒಳಪಡುವ ಆಸ್ಪತ್ರೆಗಳ ವಿವರಗಳನ್ನು ಒದಗಿಸುವುದು; | ರಾಜ್ಯದಲ್ಲಿ ಯಶಸ್ವಿನಿ ಯೋಜನೆಯನ್ನು ಪುನರ್ ಜಾರಿಗೊಳಿಸುವ ಕಾರ್ಯ ಪ್ರಗತಿ ಹಂತದಲ್ಲಿದ್ದು, ಯಾವ ಯಾವ ಕಾಯಿಲೆ/ ಆಸ್ಪತ್ರೆಗಳನ್ನು ಒಳಪಡಿಸಬೇಕೆಂಬ ಬಗ್ಗೆ ಕಾರ್ಯವು ಪ್ರಗತಿ ಹಂತದಲ್ಲಿರುತ್ತದೆ. |
| ಈ) | ಸಹಕಾರಿ ಬ್ಯಾಂಕುಗಳ ಸದಸ್ಯರುಗಳಿಗೆ ಈ ಯೋಜನೆ ಅನ್ವಯವಾಗುತ್ತದೆಯೇ; (ವಿವರ ನೀಡುವುದು) | ಸಹಕಾರಿ ಬ್ಯಾಂಕುಗಳ ಸದಸ್ಯರುಗಳಿಗೆ ಯೋಜನೆಯಲ್ಲಿ ಒಳಪಡಿಸುವ ಉದ್ದೇಶವನ್ನು ಹೊಂದಿರುತ್ತದೆ. ಈ ಯೋಜನೆಯ ಬಗ್ಗೆ ಮಾರ್ಗಸೂಚಿ ಹಾಗೂ ನಿಯಮಗಳನ್ನು ರೂಪಿಸುವ ಕಾರ್ಯ ಪ್ರಗತಿ ಹಂತದಲ್ಲಿರುತ್ತದೆ. |

**ಸಂಖ್ಯೆ: ಸಿಒ 309 ಸಿಎಲ್ಎಸ್ 2022**

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು